**Akashvani : Bangalore**
**Regional Bulletin In Kannada**
**26.10.2025 / 2.30 pm**

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

**26.10.2025 / 2.30 pm**

**<><*<><>*><>**

ಮುಖ್ಯಾಂಶಗಳು

೧. ಬೆಂಗಳೂರಿನ ಎಂಜಿನಿಯರ್ ಕಪಿಲ್ ಶರ್ಮಾ ಪರಿಸರ ಪ್ರೇಮದ ಬಗ್ಗೆ ಮನದ ಮಾತಿನಲ್ಲಿ ಪ್ರಧಾನಿ ನರೇಂದ್ರ ಮೋದಿ ಶ್ಲಾಘನೆ

೨. ರಾಜ್ಯದ ಕಾಫಿ ಹಾಗೂ ಬಾಗಲಕೋಟೆಯ ಮುಧೋಳ ಶ್ವಾನಗಳ ಪರಾಕ್ರಮದ ಬಗ್ಗೆ ಪ್ರಧಾನಿ ಪ್ರಸ್ತಾಪ

೩. ಬೆಂಗಳೂರಿನ ಕಬ್ಬನ್‌ಪಾರ್ಕ್‌ನಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಸಾರ್ವಜನಿಕರೊಂದಿಗೆ ಸಂವಾದ

೪. ಮೈಸೂರಿನಲ್ಲಿ ಅಂಚೆ ಇಲಾಖೆಯಿಂದ ಮ್ಯಾರಾಥಾನ್ ; ಇಲಾಖೆಯ ನೂತನ ಆಪ್ ಬಗ್ಗೆ ಜಾಗೃತಿ

***************

ಮಾವೋವಾದಿಗಳಿಂದ ಕಗ್ಗತ್ತಲಲ್ಲಿದ್ದ ಪ್ರದೇಶಗಳಲ್ಲಿಯೂ ಈ ಬಾರಿ ದೀಪಾವಳಿಯ ದೀಪಗಳು ಬೆಳಗಿವೆ ಎಂದು ಪ್ರಧಾನಮಂತ್ರಿ ನರೇಂದ್ರ ಮೋದಿ ತಿಳಿಸಿದ್ದಾರೆ. ತಮ್ಮ 'ಮನ್ ಕಿ ಬಾತ್' ಕಾರ್ಯಕ್ರಮದ ೧೨೭ ನೇ ಸಂಚಿಕೆಯ ಮೂಲಕ ಸಮಸ್ತ ಭಾರತೀಯರನ್ನುದ್ದೇಶಿಸಿ ಮಾತನಾಡಿದ ಅವರು, ನವೆಂಬರ್ ೭ ರಂದು 'ವಂದೇ ಮಾತರಂ' ಗೀತೆ ರಚನೆಯ ೧೫೦ ನೇ ವರ್ಷಾಚರಣೆ ಆರಂಭವಾಗಲಿದೆ ಎಂದು ಘೋಷಿಸಿದರು. ಬೆಂಗಳೂರಿನ ಎಂಜಿನಿಯರ್ ಕಪಿಲ್ ಶರ್ಮಾ ಅವರು, ಸ್ಥಳೀಯರು

ಮತ್ತು ಉದ್ದಿಮೆಗಳ ಸಹಕಾರದೊಂದಿಗೆ ೪೦ ಬಾವಿಗಳು ಮತ್ತು ಆರು ಕೆರೆಗಳನ್ನು ಪುನರುಜ್ಜೀವನಗೊಳಿಸಿರುವ ಕುರಿತು ಪ್ರಧಾನಿ ಶ್ಲಾಘನೆ ವ್ಯಕ್ತಪಡಿಸಿದರು.

**ಧ್ವನಿ : ಪ್ರಧಾನಿ ನರೇಂದ್ರ ಮೋದಿ ( 37 ಸೆಕೆಂಡುಗಳು)**

ಸುಮಾರು ಐದು ವರ್ಷಗಳ ಹಿಂದೆ ಭಾರತೀಯ ಶ್ವಾನ ತಳಿಗಳನ್ನು ದತ್ತು ಪಡೆಯಲು ತಾವು ನೀಡಿದ್ದ ಕರೆಯನ್ನು ಸ್ಮರಿಸಿದ ಪ್ರಧಾನಿ, ಈ ನಿಟ್ಟಿನಲ್ಲಿ ಬಿಎಸ್‌ಎಫ್ ಮತ್ತು ಸಿಆರ್‌ಪಿಎಫ್ ಪಡೆಗಳು ಶ್ಲಾಘನೀಯ ಪ್ರಯತ್ನ ಮಾಡಿವೆ ಎಂದು ತಿಳಿಸಿದ್ದಾರೆ. ಮುಧೋಳ, ಮೊಂಗ್ರೆಲ್ಸ್, ಕೊಂಬೈ ಮತ್ತು ಪಾಂಡಿಕೋನದಂತಹ ಭಾರತೀಯ ಬೇಟೆ ನಾಯಿ ತಳಿಗಳಿಗೆ ಬೆಂಗಳೂರಿನ ಸಿಆರ್‌ಪಿಎಫ್‌ನ ಶ್ವಾನ ತಳಿ ಮತ್ತು ತರಬೇತಿ ಶಾಲೆಯಲ್ಲಿ ತರಬೇತಿ ನೀಡಲಾಗುತ್ತಿದೆ ಎಂದು ಹೇಳಿದರು. ಕಳೆದ ವರ್ಷ ಲಕ್ನೋದಲ್ಲಿ ನಡೆದ ಪೊಲೀಸ್ ಡ್ಯೂಟಿ ಮೀಟ್‌ನಲ್ಲಿ ಬಿಎಸ್‌ಎಫ್‌ನ 'ರಿಯಾ' ಎಂಬ ಮುಧೋಳ ಬೇಟೆನಾಯಿ ಪ್ರಥಮ ಬಹುಮಾನ ಗೆದ್ದಿದ್ದನ್ನು ಅವರು ಉಲ್ಲೇಖಿಸಿದರು. ಈ ಶ್ವಾನಗಳ ಪರಾಕ್ರಮವನ್ನು ಇದೇ ೩೧ ರಂದು ನಡೆಯುವ ಏಕತಾ ದಿನದ ಮೆರವಣಿಗೆಯಲ್ಲಿ ವೀಕ್ಷಿಸಬಹುದು ಎಂದು ಅವರು ಹೇಳಿದರು. ಒಡಿಶಾದ ಕೊರಾಪುಟ್ ಕಾಫಿಯ ರುಚಿ ಮತ್ತು ಅದು ಸ್ಥಳೀಯ ಬುಡಕಟ್ಟು ಮಹಿಳೆಯರು ಹಾಗೂ ಯುವ ವೃತ್ತಿಪರರ ಜೀವನದಲ್ಲಿ ತಂದಿರುವ ಸಕಾರಾತ್ಮಕ ಬದಲಾವಣೆಯ ಬಗ್ಗೆ ಪ್ರಧಾನಿ ಮೆಚ್ಚುಗೆ ವ್ಯಕ್ತಪಡಿಸಿದರು. ಇದೇ ವೇಳೆ ಅವರು, ಕರ್ನಾಟಕದ ಚಿಕ್ಕಮಗಳೂರು, ಕೊಡಗು ಮತ್ತು ಹಾಸನ, ತಮಿಳುನಾಡಿನ ಪುಲನಿ, ಸಿವರಾಯ್, ನೀಲಗಿರಿ ಮತ್ತು ಅಣ್ಣಾಮಲೈ ಪ್ರದೇಶಗಳು, ಕರ್ನಾಟಕ-ತಮಿಳುನಾಡು ಗಡಿಭಾಗದಲ್ಲಿನ ಬಿಳಿಗಿರಿ ಪ್ರದೇಶ, ಕೇರಳದ ವೈನಾಡು, ತಿರುವಾಂಕೂರ್ ಮತ್ತು ಮಲಬಾರ್ ಪ್ರದೇಶಗಳನ್ನು ಪ್ರಸ್ತಾಪಿಸಿ,

ಭಾರತದ ಕಾಫಿಯ ವೈವಿಧ್ಯತೆ ನೋಡಲು ಬಹಳ ಅದ್ಭುತವೆನಿಸುತ್ತದೆ ಎಂದು ಬಣ್ಣಿಸಿದರು.

***************

ಪ್ರಧಾನಿ ನರೇಂದ್ರ ಮೋದಿ ಇಂದು ತಮ್ಮ ಮನ್ ಕಿ ಬಾತ್ ನಲ್ಲಿ ಬೆಂಗಳೂರಿನ ಎಂಜಿನಿಯರ್ ಕಪಿಲ್ ಶರ್ಮಾ ಬಗ್ಗೆ ಪ್ರಸ್ತಾಪಿಸಿದ್ದಾರೆ. ೧೮ ವರ್ಷಗಳ ಹಿಂದೆ ಬೆಂಗಳೂರಿಗೆ ಬಂದ ಛತ್ತೀಸ್‌ಗಢದ ಸಾಫ್ಟ್‌ವೇರ್ ಎಂಜಿನಿಯರ್ ಕಪಿಲ್ ಶರ್ಮಾ ಓರ್ವ ಪರಿಸರಪ್ರಿಯ. ಬೆಂಗಳೂರು ನಗರದಲ್ಲಿ ಹಸಿರಿನ ಪ್ರಮಾಣ ಕಡಿಮೆಯಾಗುತ್ತಿರುವುದರಿಂದ ತಾಪಮಾನ ಏರಿಕೆಯಾಗುತ್ತಿದೆ ಎಂದು ಮನಗಂಡ ಅವರು, ವಾರಾಂತ್ಯದ ಸಮಯದಲ್ಲಿ ಗಿಡ ನೆಡುವುದನ್ನು ೨೦೦೭ರಲ್ಲಿ ಆರಂಭಿಸಿ, ತಮ್ಮ ಮನೆಯ ಸಮೀಪ ಮತ್ತು ಕಚೇರಿಗೆ ಹೋಗುವ ದಾರಿಯಲ್ಲಿ ನೂರಾರು ಸಸಿಗಳನ್ನು ನೆಟ್ಟಿದ್ದಾರೆ.  ಗಿಡಗಳನ್ನು ನೆಡುವ ಕಾರ್ಯದ ಜೊತೆಗೆ ಜಲ ಮೂಲಗಳನ್ನು ಉಳಿಸುವ ಕಡೆಗೂ ಕಪಿಲ್ ಶರ್ಮಾ ಗಮನ ನೀಡಿದ್ದಾರೆ. ನಗರದಲ್ಲಿ ಸರಿಯಾದ ನಿರ್ವಹಣೆ ಇಲ್ಲದೆ ಬತ್ತಿ ಹೋಗಿದ್ದ ಅಥವಾ ಯೋಗ್ಯವಲ್ಲದ ಕೆರೆಗಳನ್ನು ಪುನರುಜ್ಜೀವನಗೊಳಿಸುವ ಕೆಲಸ ಮಾಡುತ್ತಿದ್ದಾರೆ. ಕಪಿಲ್ ಶರ್ಮಾ ಅವರ ತಂಡವು ಬೆಂಗಳೂರು ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ೪೦ ಬಾವಿಗಳು ಮತ್ತು ಆರು ಕೆರೆಗಳನ್ನು ಪುನರುಜ್ಜೀವನಗೊಳಿಸಿದೆ. ಇಂದು ಪ್ರಧಾನಿ  ಮನ್ ಕಿ ಬಾತ್ ನಲ್ಲಿ ತಮ್ಮ ಪರಿಸರ ಪ್ರೇಮವನ್ನು ಪ್ರಸ್ತಾಪಿಸಿದಕ್ಕೆ ಆಕಾಶವಾಣಿಯೊಂದಿಗೆ ಕಪಿಲ್ ಶರ್ಮಾ ಸಂತಸ ಹಂಚಿಕೊಂಡಿದ್ದಾರೆ.

**ಧ್ವನಿ : ಕಪಿಲ್ ಶರ್ಮಾ ( 48 ಸೆಕೆಂಡುಗಳು)**

***************

ರಾಜ್ಯದ ಕಾಫಿ ಬಗ್ಗೆ ಪ್ರಧಾನಿ ಮೋದಿ ಇಂದು ಮನ್ ಕಿ ಬಾತ್ ನಲ್ಲಿ ಪ್ರಸ್ತಾಪಿಸಿದ್ದಾರೆ. ಈ ಕುರಿತಂತೆ ಆಕಾಶವಾಣಿಯೊಂದಿಗೆ ಪ್ರತಿಕ್ರಿಯಿಸಿರುವ ಕೊಡಗು ಕಾಫಿ ಬೆಳೆಗಾರರ ಸಂಘಟನೆಯ ನಿರ್ದೇಶಕರಾದ ಕೆ.ಕೆ.ವಿಶ್ವನಾಥ್ ಇಂದು ರಾಜ್ಯದ ಕಾಫಿ ವಿಶ್ವದಾದ್ಯಂತ ಮೆಚ್ಚುಗೆ ಗಳಿಸುತ್ತಿದೆ. ಪ್ರಧಾನಿ ಅವರು, ಮನ್ ಕಿ ಬಾತ್ ನಲ್ಲಿ ಪ್ರಸ್ತಾಪಿಸಿರುವುದು ಸಂತಸ ತಂದಿದೆ ಎಂದು ತಿಳಿಸಿದ್ದಾರೆ.

**ಧ್ವನಿ : ವಿಶ್ವನಾಥ್ ( 34 ಸೆಕೆಂಡುಗಳು)**

***************

"ಬೆಂಗಳೂರಿನ ಬಿ ಖಾತಾ ಆಸ್ತಿಗಳನ್ನು ಎ ಖಾತಾಗೆ ಪರಿವರ್ತನೆ ಮಾಡುತ್ತಿರುವ ಬಗ್ಗೆ ಇಲ್ಲಸಲ್ಲದ ಟೀಕೆ ಮಾಡುತ್ತಿರುವ ಕುಮಾರಸ್ವಾಮಿ ವಿರುದ್ಧ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅಸಮಾಧಾನ ವ್ಯಕ್ತಪಡಿಸಿದ್ದಾರೆ. ಕಬ್ಬನ್ ಪಾರ್ಕ್ ನಲ್ಲಿ ಇಂದು ನಡೆದ ಬೆಂಗಳೂರು ನಡಿಗೆ ಕಾರ್ಯಕ್ರಮದ ವೇಳೆ ಅವರು ಸಾರ್ವಜನಿಕರ ಜೊತೆ ಸಂವಾದ ನಡೆಸಿದರು. ಈ ವೇಳೆ ನಾಗರಿಕರೊಬ್ಬರು, ಸರ್ಕಾರ ಎಲ್ಲಾ ಆಸ್ತಿಗಳನ್ನು ಎ ಖಾತಾ ಆಗಿ ಪರಿವರ್ತನೆ ಮಾಡುತ್ತಿರುವುದು ಒಳ್ಳೆಯ ಕೆಲಸ ಎಂದು ಸರ್ಕಾರದ ತೀರ್ಮಾನವನ್ನು ಸ್ವಾಗತಿಸಿದರು. ಇದಕ್ಕೆ ಪ್ರತಿಕ್ರಿಯಿಸಿದ ಡಿಕೆಶಿ, "ಎ ಖಾತಾ ನಿಮ್ಮ ಆಸ್ತಿ ದಾಖಲೆ. ಸಾರ್ವಜನಿಕರ ಆಸ್ತಿ ದಾಖಲೆಗಳನ್ನು ಸರಿಪಡಿಸಿ, ಅವುಗಳನ್ನು ಜನರಿಗೆ ನೀಡುವುದು ನಮ್ಮ ಸರ್ಕಾರದ ಆರನೇ ಗ್ಯಾರಂಟಿ ಎಂದು ಸಮರ್ಥಿಸಿಕೊಂಡರು.

***************

ಮೈಸೂರಿನಲ್ಲಿ ಕರ್ನಾಟಕ ಅಂಚೆ ಇಲಾಖೆ ಆಯೋಜಿದ್ದ ಭಾರತ ಅಂಚೆ ಮೈಸೂರು ಮ್ಯಾರಥಾನ್ ಕಾರ್ಯಕ್ರಮ ಯಶಸ್ವಿಯಾಗಿ ನಡೆಯಿತು. ಮೈಸೂರು ಕೊಡಗು ಲೋಕಸಭಾ ಕ್ಷೇತ್ರದ ಸಂಸದ ಯದುವೀರ ಕೃಷ್ಣದತ್ತ ಚಾಮರಾಜ ಒಡೆಯರ್

ಮ್ಯಾರಥಾನ್ ನಲ್ಲಿ ಭಾಗಿಯಾಗುವ ಮೂಲಕ ಓಟಗಾರರಿಗೆ ಪ್ರೋತ್ಸಾಹ ನೀಡಿದರು. ನಜರ್‌ಬಾದ್ ನಲ್ಲಿರುವ ಅಂಚೆ ಇಲಾಖೆಯ ಮುಖ್ಯ ಕಚೇರಿಯಿಂದ ಚಾಮುಂಡಿ ಬೆಟ್ಟ ಸೇರಿದಂತೆ ವಿವಿಧ ರಸ್ತೆಗಳಲ್ಲಿ ಮ್ಯಾರಥಾನ್ ಆಯೋಜಿಸಲಾಗಿತ್ತು. ಮ್ಯಾರಥಾನ್ ನಲ್ಲಿ ಭಾಗವಹಿಸಿ ಮಾತನಾಡಿದ ಸಂಸದ ಯದುವೀರ್ ಒಡೆಯರ್ ಮೈಸೂರಿನಲ್ಲಿ ಮ್ಯಾರಥಾನ್ ಆಯೋಜಿಸಿರುವುದು ಸಂತಸವಾಗಿದೆ. ಕ್ರೀಡೆ ಹಾಗೂ ವ್ಯಾಯಾಮಕ್ಕೆ ಪ್ರೋತ್ಸಾಹ ನೀಡುತ್ತಿರುವ ಅಂಚೆ ಇಲಾಖೆಗೆ ಅಭಿನಂದನೆ ಸಲ್ಲಿಸಿದರು. ಪ್ರತಿಯೊಬ್ಬರೂ ತಮ್ಮ ಅರೋಗ್ಯಯುತ ಜೀವನ ನಡೆಸಲು ಯೋಗ, ವ್ಯಾಯಾಮಗಳು ಮುಖ್ಯ ಎಂದು ತಿಳಿಸಿದರು.

**ಧ್ವನಿ : ಯದುವೀರ್ ಒಡೆಯರ್ ( 26 ಸೆಕೆಂಡುಗಳು)**

ಅಂಚೆ ಇಲಾಖೆಯ ರಾಜ್ಯ ಮುಖ್ಯ ಚೀಫ್ ಪೋಸ್ಟ್ ಮಾಸ್ಟರ್ ಜನರಲ್ ಪ್ರಕಾಶ್ ಮಾತನಾಡಿ, ಇಂದಿನ ಮ್ಯಾರಥಾನ್ ಕಾರ್ಯಕ್ರಮವು ಫಿಟ್ ಇಂಡಿಯಾದ ಒಂದು ಭಾಗವಾಗಿದೆ ಎಂದು ಹೇಳಿದರು. ಅಂಚೆ ಇಲಾಖೆಯ ಉತ್ಪನ್ನಗಳನ್ನು ಇಲ್ಲಿ ಪ್ರದರ್ಶಿಸಲಾಗುತ್ತಿದೆ, ಹಾಗೂ ಅಂಚೆ ಇಲಾಖೆ ಹೊಸದಾಗಿ ಪರಿಚಯಿಸಿರುವ ಅಂಚೆ ಇಲಾಖೆಯ ಆಪ್ ಬಗ್ಗೆ ಜನರಿಗೆ ತಲುಪಿಸುವ ಕೆಲಸ ಮಾಡಲಾಗುತ್ತಿದೆ. ಈ ಆಪ್ ಮೂಲಕ ಜನರು ಮನೆಯಲ್ಲೇ ಕುಳಿತು ಸೇವೆ ಪಡೆದುಕೊಳ್ಳಬಹುದು ಎಂದು ಸ್ಪಷ್ಟ ಪಡಿಸಿದರು.

***************